ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2146
ಮಾನ್ಯ ಸದಸ್ಯರ ಹೆಸರು	ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	18.03.2022
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯಾಂದ್ಯಂತ ಮಲೆನಾಡು ಮತ್ತು ಕರಾವಳಿ ಭಾಗದಲ್ಲಿ ನೆಲೆಸಿರುವ ಹಿಂದುಳಿದ ಸಮುದಾಯಕ್ಕೆ ಸೇರಿದ ಈಡಿಗ/ಬಿಲ್ಲವ ಜನಾಂಗದ 27 ಉಪ ಪಂಗಡಗಳು ಆರ್ಥಿಕವಾಗಿ ಶೈಕ್ಷಣಿಕವಾಗಿ ಮತ್ತು ಸಾಮಾಜಿಕವಾಗಿ ಸಮಾಜದ ಮುಖ್ಯ ವಾಹಿನಿಯಿಂದ ದೂರ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪ್ರಸ್ತುತ ಚಾಲ್ತಿಯಲ್ಲಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ: 30.03.2002ರಲ್ಲಿ ಹಿಂದುಳಿದ ವರ್ಗಗಳನ್ನು ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ಎಂದು ವರ್ಗೀಕರಿಸಲಾಗಿದೆ. ಸದರಿ ಹಿಂದುಳಿದ ವರ್ಗಗಳ ಪಟ್ಟಿಯ ಪ್ರವರ್ಗ-2ಎ ರಡಿಯಲ್ಲಿ ಈಡಿಗ/ಬಿಲ್ಲವ ಜನಾಂಗಗಳನ್ನೊಳಗೊಂಡಂತೆ ಒಟ್ಟು 26 ಜಾತಿಗಳು ಕ್ರಮಸಂಖ್ಯೆ:4 ರಡಿಯಲ್ಲಿ ಸೇರ್ಪಡೆಗೊಂಡಿರುತ್ತವೆ. ಪ್ರವರ್ಗ-2ಎ ಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಶೇಕಡ 15 ರ ಮೀಸಲಾತಿ ಸೌಲಭ್ಯ ಕಲ್ಪಿಸಲಾಗಿರುತ್ತದೆ.
ಆ)	ಈ ಸಮಾಜದ ಎಲ್ಲಾ ಹಂತಗಳಲ್ಲಿ ಸಶಕ್ತಗೊಳಿಸಲು ಸರ್ಕಾರ ಕ್ರಿಯಾ ಯೋಜನೆಯನ್ನು ರೂಪಿಸಿದೆಯೇ;	ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ಪ್ರವರ್ಗ-2ಎ ನಲ್ಲಿ ಬರುವ ಈಡಿಗ/ಬಿಲ್ಲವ ಜನಾಂಗದ 27 ಉಪ ಪಂಗಡಗಳು ಸೇರಿದಂತೆ ಪ್ರವರ್ಗ-1,2ಎ,3ಎ,3ಬಿಗೆ ಸೇರಿದ ಹಿಂದುಳಿದ ವರ್ಗಗಳ ಆರ್ಥಿಕಾಭಿವೃದ್ಧಿಗಾಗಿ ಅರಿವು ಶೈಕ್ಷಣಿಕ ಸಾಲ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆಗಳ ಮೂಲಕ ಆರ್ಥಿಕ ಸ್ವಾವಲಂಬಿಗಳಾಗಲು ಕ್ರಿಯಾ ಯೋಜನೆಗಳನ್ನು ರೂಪಿಸಲಾಗಿದೆ. ಅದರಂತೆ, ಈಡಿಗ/ಬಿಲ್ಲವ ಜನಾಂಗಕ್ಕೆ ಪ್ರತ್ಯೇಕ ಅಭಿವೃದ್ಧಿ ನಿಗಮವನ್ನು ಸ್ಥಾಪಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.
ಇ)	ರೂಪಿಸಿದ್ದಲ್ಲಿ, ಈ ಜನಾಂಗದ ಸರ್ವತೋಮುಖ ಅಭಿವೃದ್ಧಿಗಾಗಿ ಇತರೆ ಜಾತಿ/ಜನಾಂಗದ ಅಭಿವೃದ್ಧಿಗಾಗಿ ಸ್ಥಾಪಿಸಿರುವ ನಿಯಮಗಳಂತೆ ಪ್ರತ್ಯೇಕ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲು ಸರ್ಕಾರ ಮುಂದಾಗುವುದೇ?	

ಸಂಖ್ಯೆ: ಹಿಂವಕ 66 ಬಿಸಿಎ 2022

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು